ಕರ್ನಾಟಕ ಸರ್ಕಾರ

ನಿರ್ದೇಶಕರ ಕಚೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ: ಪಪೂಶಿ/ಪರೀಕ್ಷೆ/ಪ್ರ&ದ್ವಿಪ್ರಾ/2019-20 ದಿನಾಂಕ: 11.10.2019.

**ಸುತ್ತೋಲೆ**

ವಿಷಯ: 2019-20ನೇ ಶೈಕ್ಷಣಿಕ ಸಾಲಿನ ಪ್ರಥಮ ಪಿಯುಸಿ ಹಾಗೂ ದ್ವಿತೀಯ ಪಿಯುಸಿ ವಿಜ್ಞಾನ ವಿಷಯಗಳ ಪ್ರಾಯೋಗಿಕ (Practical) ಪರೀಕ್ಷೆ, ಪ್ರಥಮ ಪಿಯುಸಿ ವಾರ್ಷಿಕ ಪರೀಕ್ಷೆ ಮತ್ತು ದ್ವಿತೀಯ ಪಿಯುಸಿ ಪೂರ್ವ ಸಿದ್ಧತಾ ಪರೀಕ್ಷೆಯನ್ನು ನಡೆಸುವ ಬಗ್ಗೆ.

* * * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ 2019-20ನೇ ಸಾಲಿನ ಪ್ರಥಮ ಪಿಯುಸಿ (Ist PUC Annual Exam) ವಾರ್ಷಿಕ ಪರೀಕ್ಷೆಗಳನ್ನು ದಿನಾಂಕ 10.02.2020 ರಿಂದ ಆರಂಭಿಸುವ ಹಿನ್ನೆಲೆಯಲ್ಲಿ ಸದರಿ ಶೈಕ್ಷಣಿಕ ಸಾಲಿನ ಪ್ರಥಮ ಪಿಯುಸಿ ತರಗತಿಗಳ ವಿಜ್ಞಾನ ವಿಷಯಗಳ ಪ್ರಾಯೋಗಿಕ ಪರೀಕ್ಷೆಗಳನ್ನು (Ist PUC Practical Exam) ದಿನಾಂಕ 02.01.2020 ರಿಂದ 10.01.2020 ರೊಳಗೆ ಮುಕ್ತಾಯಗೊಳ್ಳುವಂತೆ ಕ್ರಮಕೈಗೊಳ್ಳುವುದು.

2019-20ನೇ ಸಾಲಿನ ಪ್ರಥಮ ಪಿಯುಸಿ (Ist PUC Annual Exam) ವಾರ್ಷಿಕ ಪರೀಕ್ಷಾ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದ್ದು, ದಿನಾಂಕ 10.02.2020 ರಿಂದ ದಿನಾಂಕ 20.02.2020 ರವರೆಗೆ ಪರೀಕ್ಷೆಗಳನ್ನು ನಡೆಸಲು ಸೂಚಿಸಿದೆ.

2019-20ನೇ ಸಾಲಿನ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಪೂರ್ವ ಸಿದ್ಧತಾ ಪರೀಕ್ಷೆಗಳನ್ನು (IInd PUC Preparatory Exam) ದಿನಾಂಕ 10.01.2020 ರಿಂದ ದಿನಾಂಕ 21.01.2020 ರೊಳಗಾಗಿ ರಾಜ್ಯಾದ್ಯಂತ ಏಕಕಾಲದಲ್ಲಿ ನಡೆಸಲು ವೇಳಾಪಟ್ಟಿ ಪ್ರಕಟಿಸಲಾಗಿದ್ದು, ಸದರಿ ಪರೀಕ್ಷೆಯನ್ನು ಆಯಾ ಜಿಲ್ಲೆಗಳಲ್ಲಿ ಮೇಲೆ ತಿಳಿಸಿದ ಅವಧಿಯೊಳಗಾಗಿ ತಪ್ಪದೇ ನಡೆಸಲು ಜಿಲ್ಲಾ ಉಪನಿರ್ದೇಶಕರು ಸೂಕ್ತ ಕ್ರಮವಹಿಸಲು ಸೂಚಿಸಿದೆ.

ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಗಳನ್ನು (IInd PUC Practical Exam) ದಿನಾಂಕ: 25.01.2020 ರಿಂದ ದಿನಾಂಕ 10.02.2020 ರೊಳಗಾಗಿ ನಡೆಸಲು ಜಿಲ್ಲಾ ಉಪನಿರ್ದೇಶಕರು ಸೂಕ್ತ ಕ್ರಮವಹಿಸಲು ಸೂಚಿಸಲಾಗಿದೆ.

ನಿರ್ದೇಶಕರು
ಪದವಿ ಪೂವ ಶಿಕ್ಷಣ ಇಲಾಖೆ.

ಪ್ರತಿಯನ್ನು :

1. ಎಲ್ಲ ಜಿಲ್ಲಾ ಉಪನಿರ್ದೇಶಕರಿಗೆ.
2. ಇಲಾಖಾ ಇ-ಆಡಳಿತ ವಿಭಾಗಕ್ಕೆ (ವೆಬ್ ಸೈಟ್‌ನಲ್ಲಿ ಪ್ರಕಟಿಸಲು)
3. ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ.
4. ಪರೀಕ್ಷಾ ವಿಭಾಗದ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರಿಗೆ.
5. ಕಛೇರಿ ಪ್ರತಿ.